**National**
**Kannada**
**22.03.2026 19.35 hrs**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

ಮುಖ್ಯಾಂಶಗಳು

೧. ಪಶ್ಚಿಮ ಏಷ್ಯಾ ಬಿಕ್ಕಟ್ಟು; ಇಂಧನ ಮತ್ತು ರಸಗೊಬ್ಬರ ವಲಯದ ಸ್ಥಿತಿಗತಿ ಕುರಿತು ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಉನ್ನತ ಮಟ್ಟದ ಸಭೆ

೨. ಹೊರ್ಮುಜ್ ಜಲಸಂಧಿ, ತನ್ನ ವೈರಿಗಳಿಗೆ ಮಾತ್ರ ಬಂದ್ - ಇರಾನ್ ಸ್ಪಷ್ಟನೆ

೩. ಸಾಮಾನ್ಯ ಜನರಿಗೆ ಕೈಗೆಟಕುವ ದರದಲ್ಲಿ ವಿದ್ಯುತ್ ದೊರಕಿಸುವುದು ಅತ್ಯಗತ್ಯ - ಭಾರತ್ ವಿದ್ಯುತ್ ಶೃಂಗಸಭೆಯಲ್ಲಿ ಕೇಂದ್ರ ಸಚಿವ ಮನೋಹರ್ ಲಾಲ್ ಅಭಿಮತ

೪. ದೇಶದ ಕಾರಾಗೃಹಗಳ ಸ್ಥಿತಿಗತಿ ಬಗ್ಗೆ ವರದಿ ಸಲ್ಲಿಸಲು ರಾಜ್ಯಗಳಿಗೆ ಸುಪ್ರೀಂಕೋರ್ಟ್ ಕಟ್ಟುನಿಟ್ಟಿನ ನಿರ್ದೇಶನ

೫. ಇಂಡಿಯನ್ ಓಪನ್ ಸ್ಕ್ವಾಷ್ ಟೂರ್ನಿ; ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಭಾರತಕ್ಕೆ ಪ್ರಶಸ್ತಿ ಖಚಿತ

***************

ಪಶ್ಚಿಮ ಏಷ್ಯಾದಲ್ಲಿ ಉಂಟಾಗಿರುವ ಉದ್ವಿಗ್ನ ಪರಿಸ್ಥಿತಿಯ ಹಿನ್ನೆಲೆಯಲ್ಲಿ, ದೇಶದ ಪೆಟ್ರೋಲಿಯಂ, ಕಚ್ಚಾ ತೈಲ, ನೈಸರ್ಗಿಕ ಅನಿಲ, ವಿದ್ಯುತ್ ಮತ್ತು ರಸಗೊಬ್ಬರ ವಲಯಗಳ ಸ್ಥಿತಿಗತಿಗಳನ್ನು ಪರಾಮರ್ಶಿಸಲು ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ಇಂದು ನವದೆಹಲಿಯಲ್ಲಿ ಉನ್ನತ ಮಟ್ಟದ ಸಭೆ ನಡೆಯಿತು.

ಅಂತಾರಾಷ್ಟ್ರೀಯ ಮಟ್ಟದ ಈ ಬಿಕ್ಕಟ್ಟಿನ ನಡುವೆಯೂ ದೇಶಾದ್ಯಂತ ಇಂಧನ ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ನೋಡಿಕೊಳ್ಳುವುದು, ಸುಗಮ ಸಾಗಾಟ ವ್ಯವಸ್ಥೆ ಮತ್ತು ಪರಿಣಾಮಕಾರಿ ವಿತರಣಾ ಜಾಲವನ್ನು ಖಚಿತಪಡಿಸಿಕೊಳ್ಳುವ ಬಗ್ಗೆ ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಲಾಯಿತು. ಈ ಮೂಲಕ ಅಗತ್ಯ ವಸ್ತುಗಳ ಪೂರೈಕೆಯಲ್ಲಿ ಯಾವುದೇ ಅಡೆತಡೆ ಉಂಟಾಗದಂತೆ ಸರ್ಕಾರವು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದೆ.

ಸಭೆಯಲ್ಲಿ ಸಚಿವರಾದ ರಾಜನಾಥ್ ಸಿಂಗ್, ಅಮಿತ್ ಶಾ, ನಿರ್ಮಲಾ ಸೀತಾರಾಮನ್ ಮತ್ತು ಡಾ. ಎಸ್. ಜೈಶಂಕರ್ ಪಾಲ್ಗೊಂಡು, ಪ್ರಚಲಿತ ವಿದ್ಯಮಾನಗಳ ಕುರಿತು ಮಾಹಿತಿ ಹಂಚಿಕೊಂಡರು.

ಇವರೊಂದಿಗೆ ಸಚಿವರಾದ ಶಿವರಾಜ್ ಸಿಂಗ್ ಚೌಹಾಣ್, ಹರ್ದೀಪ್ ಸಿಂಗ್ ಪುರಿ, ಪಿಯೂಷ್ ಗೋಯಲ್, ಜೆ.ಪಿ. ನಡ್ಡಾ, ಕೆ. ರಾಮಮೋಹನ್ ನಾಯ್ಡು, ಮನೋಹರ್ ಲಾಲ್ ಮತ್ತು ಅಶ್ವಿನಿ ವೈಷ್ಣವ್ ಉಪಸ್ಥಿತರಿದ್ದು, ಆಯಾ ಸಚಿವಾಲಯಗಳ ಸಿದ್ಧತೆಗಳ ಬಗ್ಗೆ ಪ್ರಧಾನಿಯವರಿಗೆ ಮಾಹಿತಿ ನೀಡಿದರು.

***************

ಹೋರ್ಮುಜ್ ಜಲಸಂಧಿಯನ್ನು ಕೇವಲ ಇರಾನ್‌ನ ಶತ್ರುಗಳಿಗಷ್ಟೇ ಮುಚ್ಚಲಾಗಿದೆ ಎಂದು ಅಂತರಾಷ್ಟ್ರೀಯ ಕಡಲ ಸಂಸ್ಥೆ - ಐಎಂಒನ ಇರಾನ್ ಪ್ರತಿನಿಧಿ ಅಲಿ ಮೌಸವಿ ಸ್ಪಷ್ಟಪಡಿಸಿದ್ದಾರೆ.

ಪ್ರಾದೇಶಿಕ ಉದ್ವಿಗ್ನತೆಯೇ ಪ್ರಸ್ತುತ ಕಡಲ ಸಂಘರ್ಷಕ್ಕೆ ಪ್ರಾಥಮಿಕ ಕಾರಣ ಎಂದು ಅಭಿಪ್ರಾಯಪಟ್ಟಿರುವ ಯುಕೆಗೆ ಇರಾನ್ ಪ್ರತಿನಿಧಿಯೂ ಆಗಿರುವ ಅಲಿ ಮೌಸವಿ, ಗಲ್ಫ್ ಮತ್ತು ಹೋರ್ಮುಜ್ ಜಲಸಂಧಿಯ ಇಂದಿನ ಪರಿಸ್ಥಿತಿಗೆ ಅಮೆರಿಕ ಮತ್ತು ಇಸ್ರೇಲ್ ಒಳಗೊಂಡಿರುವ ಸಂಘರ್ಷಗಳೇ ಮೂಲ ಕಾರಣ ಎಂದು ತಿಳಿಸಿದ್ದಾರೆ.

ಜಲಸಂಧಿಯಲ್ಲಿ ಸಂಚಾರ ಸಾಧ್ಯವಿದ್ದರೂ, ಅಂತರಾಷ್ಟ್ರೀಯ ಜವಾಬ್ದಾರಿಗಳು ಇರಾನ್‌ನ ಪ್ರಾದೇಶಿಕ ಸಮಗ್ರತೆ ಮತ್ತು ಹಕ್ಕುಗಳಿಗೆ ಗೌರವ ನೀಡುವಂತಿರಬೇಕು ಎಂದಿರುವ ಅವರು, ಕಡಲ ಸುರಕ್ಷತಾ ನಿಯಮಗಳನ್ನು ಬಲಪಡಿಸಲು ಮತ್ತು ಈ ಪ್ರದೇಶದಲ್ಲಿ ಕಾರ್ಯನಿರ್ವಹಿಸುವ ನಾವಿಕರ ರಕ್ಷಣೆಗಾಗಿ ಐಎಂಒ ಹಾಗೂ ವಿವಿಧ ರಾಷ್ಟ್ರಗಳೊಂದಿಗೆ ಸಹಕರಿಸಲು ಟೆಹ್ರಾನ್ ಸಿದ್ಧವಿದೆ ಎಂದು ತಿಳಿಸಿದ್ದಾರೆ.

***************

ಪಶ್ಚಿಮ ಏಷ್ಯಾದಲ್ಲಿನ ಸಂಘರ್ಷದ ಆರ್ಥಿಕ ಪರಿಣಾಮಗಳನ್ನು ನಿರ್ವಹಿಸಲು ಭಾರತ ವೇಗವಾದ ಮತ್ತು ಸಮತೋಲಿತ ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ಭಾರತೀಯ ಕೈಗಾರಿಕಾ ಒಕ್ಕೂಟ ತಿಳಿಸಿದೆ.

ಈ ಕುರಿತು ಮಾತನಾಡಿರುವ ಸಿಐಐ ಮಹಾನಿರ್ದೇಶಕ ಚಂದ್ರಜಿತ್ ಬ್ಯಾನರ್ಜಿ, ಪೂರೈಕೆ ಸರಪಳಿ, ಇಂಧನ ಭದ್ರತೆ ಮತ್ತು ಆರ್ಥಿಕ ಸ್ಥಿರತೆಯನ್ನು ಕಾಪಾಡಲು ಸರ್ಕಾರ ಮತ್ತು ಉದ್ಯಮ ರಂಗ ಜಂಟಿಯಾಗಿ ಶ್ರಮಿಸುತ್ತಿವೆ. ಕಳೆದ ಹಲವು ವರ್ಷಗಳ ಆರ್ಥಿಕ ಸುಧಾರಣೆಗಳು ಮತ್ತು 'ಆತ್ಮನಿರ್ಭರ

ಭಾರತ' ಉಪಕ್ರಮದ ಅಡಿಯಲ್ಲಿ ಸ್ವಾವಲಂಬನೆಗೆ ನೀಡಿದ ಒತ್ತು, ಬಾಹ್ಯ ಆಘಾತಗಳನ್ನು ತಡೆದುಕೊಳ್ಳುವ ದೇಶದ ಸಾಮರ್ಥ್ಯವನ್ನು ಹೆಚ್ಚಿಸಿದೆ. ಕಚ್ಚಾ ತೈಲ ಮೂಲಗಳ ವೈವಿಧ್ಯೀಕರಣ, ಎಲ್‌ಪಿಜಿ ಉತ್ಪಾದನೆ ಹೆಚ್ಚಳ ಮತ್ತು ರಫ್ತು ವಲಯಕ್ಕೆ ನೀಡುತ್ತಿರುವ ಬೆಂಬಲವು ಈ ಬಿಕ್ಕಟ್ಟಿನ ಪರಿಣಾಮವನ್ನು ತಗ್ಗಿಸಲು ಸಹಕಾರಿಯಾಗಿದೆ ಎಂದಿದ್ದಾರೆ.

ಈ ಪರಿಸ್ಥಿತಿಯು ಭಾರತವು ಸುಸ್ಥಿರ ಮತ್ತು ಸ್ವಾವಲಂಬಿ ಇಂಧನ ವ್ಯವಸ್ಥೆಗಳತ್ತ ಮುನ್ನಡೆಯುವ ಅಗತ್ಯವನ್ನು ಒತ್ತಿಹೇಳುತ್ತಿದೆ ಎಂದಿರುವ ಅವರು, ನವೀಕರಿಸಬಹುದಾದ ಇಂಧನ, ಹಸಿರು ಹೈಡ್ರೋಜನ್ ಮತ್ತು ಜೈವಿಕ ಇಂಧನಗಳ ಮೇಲಿನ ಹೂಡಿಕೆಯು ಜಾಗತಿಕ ಇಂಧನ ಮಾರುಕಟ್ಟೆಗಳ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡುವ ಪ್ರಮುಖ ಕಾರ್ಯತಂತ್ರಗಳಾಗಿವೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

***************

ದೇಶಾದ್ಯಂತ ಪೆಟ್ರೋಲ್, ಡೀಸೆಲ್ ಮತ್ತು ಎಲ್‌ಪಿಜಿ ಪೂರೈಕೆಯಲ್ಲಿ ಯಾವುದೇ ಕೊರತೆ ಇಲ್ಲ ಎಂದು ಕೇಂದ್ರ ಸರ್ಕಾರ ಭರವಸೆ ನೀಡಿದೆ.

ತೈಲ ಸಂಸ್ಕರಣಾಗಾರಗಳು ಪೂರ್ಣ ಸಾಮರ್ಥ್ಯದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಆತಂಕದ ಕಾಯ್ದಿರಿಸುವಿಕೆಗಳು ಕಡಿಮೆಯಾಗಿವೆ ಎಂದು ಪೆಟ್ರೋಲಿಯಂ ಸಚಿವಾಲಯ ತಿಳಿಸಿದೆ. ಇಂಧನ ಕಾಳಸಂತೆ ನಡೆಯದಂತೆ ದೇಶಾದ್ಯಂತ ಕಟ್ಟುನಿಟ್ಟಿನ ನಿಗಾವಹಿಸಲಾಗಿದ್ದು, ಆಸ್ಪತ್ರೆ ಮತ್ತು ಶಿಕ್ಷಣ ಸಂಸ್ಥೆಗಳಂತಹ ಅಗತ್ಯ ವಲಯಗಳಿಗೆ ಇಂಧನ ಪೂರೈಕೆಗೆ ಆದ್ಯತೆ ನೀಡಲಾಗುತ್ತಿದೆ.

ಮತ್ತೊಂದೆಡೆ ಪಶ್ಚಿಮ ಏಷ್ಯ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ ಅಲ್ಲಿನ ಭಾರತೀಯರ ಸುರಕ್ಷತೆಗೆ ವಿದೇಶಾಂಗ ಸಚಿವಾಲಯ ಹೆಚ್ಚಿನ ಒತ್ತು ನೀಡಿದೆ. ಫೆಬ್ರವರಿ ೨೮ ರಿಂದ ಈವರೆಗೆ ಸುಮಾರು ೩.೫ ಲಕ್ಷಕ್ಕೂ ಅಧಿಕ ಭಾರತೀಯರು ಸಂಕಷ್ಟದ ಪ್ರದೇಶಗಳಿಂದ ಸ್ವದೇಶಕ್ಕೆ ಮರಳಿದ್ದಾರೆ. ಇಂದು ಯುಎಇ ಇಂದ ೬೦ ವಿಮಾನಗಳು ಕಾರ್ಯನಿರ್ವಹಿಸುವ ನಿರೀಕ್ಷೆ ಇದ್ದು, ಸೌದಿ ಅರೇಬಿಯಾ ಮತ್ತು ಕತಾರ್‌ನಿಂದ ಸೇವೆಗಳು ಮುಂದುವರೆದಿವೆ.

ದಿನದ ೨೪ ಗಂಟೆ ಕಾರ್ಯನಿರ್ವಹಿಸುವ ನಿಯಂತ್ರಣ ಕೊಠಡಿಯ ಮೂಲಕ ಪರಿಸ್ಥಿತಿಯ ನಿರಂತರ ನಿಗಾವಹಿಸಲಾಗುತ್ತಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

***************

ವಿದ್ಯುತ್ ಎಂಬುದು ಮೂಲಭೂತ ಅವಶ್ಯಕತೆಯಾಗಿದ್ದು, ಸಾಮಾನ್ಯ ಜನರಿಗೆ ಕೈಗೆಟುಕುವ ದರದಲ್ಲಿ ವಿದ್ಯುತ್ ದೊರೆಯುವಂತೆ ಮಾಡುವುದು ಅತ್ಯಗತ್ಯ ಎಂದು ಕೇಂದ್ರ ಇಂಧನ ಸಚಿವ ಮನೋಹರ್ ಲಾಲ್ ಹೇಳಿದ್ದಾರೆ.

ನವದೆಹಲಿಯಲ್ಲಿ ನಡೆದ 'ಭಾರತ ವಿದ್ಯುತ್ ಶೃಂಗಸಭೆ ೨೦೨೬'ರ ಸಮಾರೋಪ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದ ಅವರು, ಸೌಭಾಗ್ಯ ಯೋಜನೆ ಮತ್ತು ಪ್ರಧಾನಮಂತ್ರಿ ಸೂರ್ಯ ಘರ್ ಯೋಜನೆ ಅಡಿಯಲ್ಲಿ ದೇಶದ ಗಡಿ ಭಾಗಗಳು ಸೇರಿದಂತೆ ವಂಚಿತ ಗ್ರಾಮಗಳಿಗೂ ವಿದ್ಯುತ್ ತಲುಪಿದೆ ಎಂದು ತಿಳಿಸಿದರು.

ನವೋದ್ಯಮಗಳು ಆವಿಷ್ಕಾರ ಮತ್ತು ಆರ್ಥಿಕತೆಯನ್ನು ಬಲಪಡಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿವೆ ಎಂದು ಶ್ಲಾಘಿಸಿದ ಸಚಿವರು, ನೀತಿ ನಿರೂಪಕರು, ಉದ್ಯಮ ನಾಯಕರು ಮತ್ತು ಹೂಡಿಕೆದಾರರು ಇಂಧನ ಕ್ಷೇತ್ರದ ಭವಿಷ್ಯದ ಬಗ್ಗೆ ಚರ್ಚಿಸಲು ಈ ಶೃಂಗಸಭೆಯು ಉತ್ತಮ ವೇದಿಕೆ ಕಲ್ಪಿಸಿದೆ ಎಂದರು.

ಇದೇ ಸಂದರ್ಭದಲ್ಲಿ ಶೃಂಗಸಭೆಯ ಮುಂದಿನ ಆವೃತ್ತಿಯು ೨೦೨೮ ರಲ್ಲಿ ಗುಜರಾತ್‌ನ ಗಾಂಧಿನಗರದಲ್ಲಿ ನಡೆಯಲಿದೆ ಎಂದು ಸಚಿವರು ಘೋಷಿಸಿದರು.

***************

ದೇಶಾದ್ಯಂತ ಇರುವ ಕಾರಾಗೃಹಗಳ ಸದ್ಯದ ಸ್ಥಿತಿಗತಿಗಳ ಬಗ್ಗೆ ಮೇ ೧೮ರೊಳಗೆ ಸಮಗ್ರ ವರದಿ ಸಲ್ಲಿಸುವಂತೆ ಸರ್ವೋಚ್ಚ ನ್ಯಾಯಾಲಯ ಎಲ್ಲಾ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಿಗೆ ಸೂಚನೆ ನೀಡಿದೆ.

ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್ ಮತ್ತು ಸಂದೀಪ್ ಮೆಹ್ತಾ ಅವರೊನ್ನೊಳಗೊಂಡ ಪೀಠ ಈ ಆದೇಶ ಹೊರಡಿಸಿದ್ದು, ಕಾರಾಗೃಹಗಳ ನಿಗದಿಪಡಿಸಿದ ಸಾಮರ್ಥ್ಯ ಮತ್ತು ಕೈದಿಗಳ ಸಂಖ್ಯೆ ಮಿತಿ ಮಿರುವುದನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮಗಳ ಬಗ್ಗೆ ಮಾಹಿತಿ ಕೋರಿದೆ.

ಮಹಿಳಾ ಕೈದಿಗಳ ಸಂಖ್ಯೆ ಮತ್ತು ಅಲ್ಲಿ ಲಭ್ಯವಿರುವ ಸೌಲಭ್ಯಗಳ ಬಗ್ಗೆಯೂ ವಿವರವಾದ ವರದಿ ನೀಡುವಂತೆ ನಿರ್ದೇಶಿಸಿರುವ ನ್ಯಾಯಪೀಠ, ವಿಶೇಷವಾಗಿ ಮಹಿಳಾ ಕೈದಿಗಳೊಂದಿಗೆ ವಾಸಿಸುತ್ತಿರುವ ಮಕ್ಕಳ ಶಿಕ್ಷಣ ಮತ್ತು ಯೋಗಕ್ಷೇಮಕ್ಕಾಗಿ ಕೈಗೊಂಡಿರುವ ಕ್ರಮಗಳ ಕುರಿತು ಮಾಹಿತಿ ನೀಡಲು ಸೂಚಿಸಿದೆ.

ಕಾರಾಗೃಹಗಳ ಸ್ಥಿತಿಗತಿಗೆ ಸಂಬಂಧಿಸಿದಂತೆ ಸುಪ್ರೀಂಕೋರ್ಟ್ ದಾಖಲಿಸಿಕೊಂಡಿರುವ ಸ್ವಯಂಪ್ರೇರಿತ ಪ್ರಕರಣದ ವಿಚಾರಣೆಯ ವೇಳೆ ಪ್ರಸ್ತುತ ಸ್ಥಿತಿಯ ನಿಖರ ಮಾಹಿತಿ ಅತ್ಯಗತ್ಯ ಹಾಗೂ ಇದು ಈ ತಿಂಗಳ ಒಂದನೇ ತಾರೀಖಿನವರೆಗಿನ ಅಂಕಿ-ಅಂಶ ಒಳಗೊಂಡಿರಬೇಕು ಎಂದು ಅಭಿಪ್ರಾಯಪಟ್ಟಿದೆ. ಈ ಪ್ರಕರಣದ ಮುಂದಿನ ವಿಚಾರಣೆ ಮೆ ೨೬ ರಂದು ನಡೆಯಲಿದೆ.

***************

ಭಾರತದ ಪುರಾತನ ಮತ್ತು ಸಂಪ್ರದಾಯಿಕ ಚಿಕಿತ್ಸಾ ಪದ್ಧತಿಗಳಾದ ಯೋಗ ಮತ್ತು ಆಯುರ್ವೇದಗಳು ಇಂದು ಜಾಗತಿಕ ಮಟ್ಟದಲ್ಲಿ ಅಪಾರ ಮನ್ನಣೆಗಳಿಸಿವೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ತಿಳಿಸಿದ್ದಾರೆ.

ಮಹಾರಾಷ್ಟ್ರದ ಪುಣೆ ಸಮೀಪದ ಉರುಲಿ ಕಾಂಚನ್‌ನಲ್ಲಿ ನ್ಯಾಚಿರೊಪಥಿ ಗ್ರಾಮ್ ಸುಧಾರ್ ಟ್ರಸ್ಟ್‌ನ ನ್ಯಾಚಿರೊಪಥಿ ಆಶ್ರಮದ ೮೧ನೇ ವರ್ಷಾಚರಣೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಪ್ರಕೃತಿಯೊಂದಿಗೆ ಹೊಂದಿಕೊಳ್ಳುವ ಜೀವನ ಶೈಲಿಯನ್ನು ಅಳವಡಿಸಿಕೊಳ್ಳುವಂತೆ ಕರೆ ನೀಡಿದರು.

***************

ಮುಂಬೈನಲ್ಲಿ ನಡೆಯುತ್ತಿರುವ ಪ್ರತಿಷ್ಠಿತ ಇಂಡಿಯನ್ ಓಪನ್ ಸ್ಕ್ವಾಷ್ ಟೂರ್ನಿಯ ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಭಾರತಕ್ಕೆ ಚಾಂಪಿಯನ್ ಪಟ್ಟ ಲಭಿಸುವುದು ಖಚಿತವಾಗಿದೆ.

ನಿನ್ನೆ ನಡೆದ ಪ್ರತ್ಯೇಕ ಸೆಮಿಫೈನಲ್ ಪಂದ್ಯಗಳಲ್ಲಿ ಭಾರತದ ಅಭಯ್ ಸಿಂಗ್ ಮತ್ತು ವೀರ್ ಚೋತ್ರಾನಿ ಅವರು ಜಯ ಸಾಧಿಸಿ ಫೈನಲ್ ಪ್ರವೇಶಿಸಿದ್ದು, ಇಂದು ನಡೆಯಲಿರುವ ಅಂತಿಮ ಹಣಾಹಣಿಯಲ್ಲಿ ಈ ಇಬ್ಬರೂ ಭಾರತೀಯರೇ ಮುಖಾಮುಖಿಯಾಗುತ್ತಿರುವುದು ವಿಶೇಷವಾಗಿದೆ.

ಮಹಿಳೆಯರ ಸಿಂಗಲ್ಸ್ ವಿಭಾಗದಲ್ಲಿ ಹಾಲಿ ಚಾಂಪಿಯನ್ ಹಾಗೂ ಅಗ್ರ ಶ್ರೇಯಾಂಕಿತ ಅನಾಹತ್ ಸಿಂಗ್, ಸತತ ಎರಡನೇ ಬಾರಿಗೆ ಫೈನಲ್ ತಲುಪಿದ್ದಾರೆ. ಇಂದು ನಡೆಯಲಿರುವ ಅಂತಿಮ ಪಂದ್ಯದಲ್ಲಿ ಅನಾಹತ್ ಅವರು ಎರಡನೇ ಶ್ರೇಯಾಂಕಿತ ಈಜಿಪ್ಟ್‌ನ ಹನಾ ಮೊಟಾಜ್ ಅವರ ಸವಾಲನ್ನು ಎದುರಿಸಲಿದ್ದಾರೆ.

***************

ಭಾರತೀಯ ರೈತರು ಇಂದು ಉರುವಲು ಮತ್ತು ಇಂಧನ ಶಕ್ತಿಯನ್ನು ಉತ್ಪಾದಿಸುವ ಸಾಮರ್ಥ್ಯವನ್ನು ಹೊಂದಿದ್ದಾರೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ.

ನವದೆಹಲಿಯಲ್ಲಿ ನಡೆದ ಕಾರ್ಯಕ್ರಮವೊಂದನ್ನುದ್ದೇಶಿಸಿ ಮಾತನಾಡಿದ ಸಚಿವರು, ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಇಂಡಿಯನ್ ಆಯಿಲ್ ಸಂಸ್ಥೆಯು ಪಾಣಿಪತ್‌ನಲ್ಲಿ ಭತ್ತದ ಹುಲ್ಲಿನಿಂದ ೧ ಲಕ್ಷ ಲೀಟರ್ ಎಥೆನಾಲ್, ೧೫೦ ಟನ್ ಬಯೋ-ಬಿಟುಮೆನ್ ಮತ್ತು ಸುಮಾರು ೭೮ ಸಾವಿರ ಟನ್ ವಿಮಾನಯಾನ ಇಂಧನವನ್ನು ಉತ್ಪಾದಿಸುತ್ತಿದೆ. ಜೈವಿಕ ತಂತ್ರಜ್ಞಾನದ ಬಳಕೆಯಿಂದ ದೇಶದಲ್ಲಿ ಡೀಸೆಲ್ ಆಮದು ಮಾಡಿಕೊಳ್ಳುವ ಅಗತ್ಯವನ್ನು ಕೊನೆಗಾಣಿಸಬಹುದು ಎಂದು ತಿಳಿಸಿದರು.

********ಮುಕ್ತಾಯ*******